ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ
ದಿನಾಂಕ : DATE : 21/03/2019

ಅನರ್ಹತೆ ಅರ್ಜಿ ಇತ್ಯರ್ಥಗೊಳಿಸಿದ ನಂತರವೇ ರಾಜೀನಾಮೆ ಬಗ್ಗೆ ನಿರ್ಧರಿಸಲು ಮನವಿ | ಅಗತ್ಯಬಿದ್ದರೆ ಕೋರ್ಟ್‌ಗೂ ಹೋಗಲು ನಿರ್ಧಾರ

# ಜಾಧವ್ ರಾಜೀನಾಮೆ ಅಂಗೀಕರಿಸದಂತೆ ಕೈ ಒತ್ತಡ

21/3/19

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಚಿಂಚೋಳಿ ಕ್ಷೇತ್ರದ ಶಾಸಕ ಡಾ. ಉಮೇಶ್ ಜಾಧವ್ ಅವರು ನೀಡಿರುವ ರಾಜೀನಾಮೆ ಪತ್ರ ಅಂಗೀಕರಿಸದಂತೆ ಕಾಂಗ್ರೆಸ್ ಬುಧವಾರ ಮತ್ತೆ ಸ್ಪೀಕರ್ ರಮೇಶ್ ಕುಮಾರ್ ಅವರಿಗೆ ಮನವಿ ಮಾಡಿದೆ. ತನ್ಮೂಲಕ ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕಲಬುರ್ಗಿಯಲ್ಲಿ ಬಿಜೆಪಿ ಟಿಕೆಟ್‌ನಿಂದ ಸ್ಪರ್ಧಿಸಲು ಸಜ್ಜಾಗಿರುವ ಉಮೇಶ್ ಜಾಧವ್‌ಗೆ ಅಡ್ಡಿ ಮಾಡುವ ಪ್ರಯತ್ನ ಮುಂದುವರೆಸಿದೆ.

ಕಾಂಗ್ರೆಸ್‌ನ ಈ ಪ್ರಯತ್ನಗಳ ಹೊರತಾಗಿಯೂ ಉಮೇಶ್ ಜಾಧವ್ ಅವರು ಲೋಕಸಭೆಗೆ ಸ್ಪರ್ಧಿಸಲು ಯಾವುದೇ ಅಡ್ಡಿ ಉಂಟಾಗುವುದಿಲ್ಲ ಎಂದೇ ಕಾನೂನು ತಜ್ಞರು ಹೇಳುತ್ತಾರೆ. ಒಮ್ಮೆ ರಾಜೀನಾಮೆ ನೀಡಿದ ನಂತರ ಅನ್ಯ ಪಕ್ಷ ಸೇರಿ ಚುನಾವಣೆ ಸ್ಪರ್ಧಿಸುವುದಕ್ಕೆ ಕಾನೂನು ಅಡ್ಡಿಯಿಲ್ಲ ಎನ್ನುತ್ತಾರೆ.

**ಮತ್ತೆ ದೂರು:** ಕಾಂಗ್ರೆಸ್ ಶಾಸಕಾಂಗ ಪಕ್ಷದ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಪಿ.ಆರ್. ರಮೇಶ್ ಬುಧವಾರ ವಿಧಾನಸಭೆ ಕಾರ್ಯದರ್ಶಿಯವರನ್ನು ಭೇಟಿ ಮಾಡಿ ಜಾಧವ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಮತ್ತೆ ಮನವಿ ಸಲ್ಲಿಸಿದರು. ಈ ಮನವಿಯಲ್ಲಿ ಡಾ.ಉಮೇಶ್ ಜಾಧವ್ ಅವರ ಸದಸ್ಯತ್ವ ರದ್ದುಗೊಳಿಸಬೇಕೆಂದು ಸಲ್ಲಿಸಿರುವ ದೂರು ಇತ್ಯರ್ಥಗೊಳಿಸಿದ ನಂತರ ರಾಜೀನಾಮೆ ಪತ್ರದ ಬಗ್ಗೆ ನಿರ್ಧಾರ ತೆಗೆದುಕೊಳ್ಳಬೇಕೆಂದು ಮನವಿ ಪತ್ರದಲ್ಲಿ ಕೋರಲಾಗಿದೆ. ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ್ ಖರ್ಗೆ ವಿರುದ್ಧ ಮುನಿಸಿಕೊಂಡಿದ್ದ ಜಾಧವ್ ಮಾ.4 ರಂದು ಸಭಾಧ್ಯಕ್ಷ ರಮೇಶಕುಮಾರ್ ಬಳಿ ಖುದ್ದಾಗಿ ತೆರಳಿ ರಾಜೀನಾಮೆ ಸಲ್ಲಿಸಿದ್ದರು. ರಾಜೀನಾಮೆ ಕುರಿತಂತೆ ಸಭಾಧ್ಯಕ್ಷರು ಇನ್ನಷ್ಟು ಸ್ಪಷ್ಟೀಕರಣ ಕೇಳಿದ ಹಿನ್ನೆಲೆಯಲ್ಲಿ ಇತ್ತೀಚೆಗೆ ಜಾಧವ್ ಲಿಖಿತ ವಿವರಣೆ ನೀಡಿದ್ದರು. ರಾಜೀನಾಮೆ ಅಂಗೀಕರಿಸುವ ಮುನ್ನವೇ ಬಿಜೆಪಿಗೆ ಸೇರ್ಪಡೆಯಾಗಿದ್ದರು.

ಕಲಬುರಗಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಡಾ. ಉಮೇಶ್ ಜಾಧವ್ ಕಣಕ್ಕಿಳಿಯುವುದು ಬಹುತೇಕ ಖಚಿತವಾಗಿದೆ. ಆದರೆ ಸಭಾಧ್ಯಕ್ಷರು ಈವರೆಗೆ ರಾಜೀನಾಮೆ ಅಂಗೀಕರಿಸದೇ ಇರುವುದರಿಂದ ತಾಂತ್ರಿಕವಾಗಿ ಅವರು ಕಾಂಗ್ರೆಸ್ ಸದಸ್ಯರಾಗಿದ್ದಾರೆ. ದೂರು ಇತ್ಯರ್ಥ ಮಾಡಿದ ನಂತರವೇ ರಾಜೀನಾಮೆ ಸ್ವೀಕರಿಸುವ ಬಗ್ಗೆ ನಿರ್ಧರಿಸುವಂತೆ ಮನವಿ ಮಾಡಿಕೊಳ್ಳಲು ಮುಂದಾಗಿದ್ದಾರೆ.

**4 ಅತೃಪ್ತರ ವಿರುದ್ಧ ನೀಡಿದ್ದ ದೂರು:** ತಮ್ಮ ಬೆಂಬಲಿಗರಿಗೆ ಸಚಿವ ಸ್ಥಾನ ನೀಡಿಲ್ಲ, ತಮ್ಮ ಜಿಲ್ಲೆಯಲ್ಲಿ ಬೇರೆ ನಾಯಕರು ಕೈ ಹಾಕುತ್ತಿರುವುದು ಸೇರಿದಂತೆ ವಿವಿಧ ಕಾರಣಗಳಿಂದ ರಾಜ್ಯ ಕಾಂಗ್ರೆಸ್ ನಾಯಕರ ಬಗ್ಗೆ ಮುನಿಸಿಕೊಂಡು ಶಾಸಕಾಂಗ ಪಕ್ಷದ ಸಭೆ, ಅಧಿವೇಶನಕ್ಕೆ ಗೈರು ಹಾಜರಿಯಾದ ಹಿನ್ನೆಲೆಯಲ್ಲಿ ಡಾ. ಉಮೇಶ್ ಜಾಧವ್ ಸೇರಿದಂತೆ ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ, ಅಥಣಿ ಶಾಸಕ ಮಹೇಶ್ ಕುಮಟಳ್ಳಿ ಹಾಗೂ ಬಳ್ಳಾರಿ ಗ್ರಾಮೀಣ ಶಾಸಕ ಬಿ. ನಾಗೇಂದ್ರ ಅವರ ವಿರುದ್ಧ ಪಕ್ಷ ವಿರೋಧಿ ಚಟುವಟಿಕೆ ಆರೋಪದ ಮೇಲೆ ಸದಸ್ಯತ್ವದಿಂದ ವಜಾ ಮಾಡುವಂತೆ ಕಾಂಗ್ರೆಸ್ ಸಭಾಧ್ಯಕ್ಷರಿಗೆ ದೂರು ನೀಡಿತ್ತು.

## ಜಾಧವ್ ಸ್ಪರ್ಧೆಗೆ ಕಾನೂನಿನ ತೊಡಕಿಲ್ಲ

ಯಾವುದೇ ಶಾಸಕ ನೀಡಿದ ರಾಜೀನಾಮೆ ಪತ್ರ ಕ್ರಮಬದ್ಧವಾಗಿದೆಯೇ, ಸ್ವ ಇಚ್ಛೆಯಿಂದ ನೀಡಿದ್ದಾರೆಯೇ ಎಂಬುದನ್ನು ಮಾತ್ರ ನೋಡಿ ಅಂಗೀಕರಿಸಬೇಕಾಗುತ್ತದೆ. ಅದೇ ರೀತಿ ಯಾವುದೇ ಶಾಸಕ ಪಕ್ಷಕ್ಕೆ ರಾಜೀನಾಮೆ ನೀಡಿ ಬೇರೆ ಪಕ್ಷಕ್ಕೆ ಸೇರ್ಪಡೆಯಾಗಿ ಚುನಾವಣೆಗೆ ಸ್ಪರ್ಧಿಸಬಹುದು. ಉಮೇಶ್ ಜಾಧವ್ ಅವರು ಈಗಾಗಲೇ ಕಾಂಗ್ರೆಸ್‌ಗೆ ರಾಜೀನಾಮೆ ನೀಡಿದ್ದಾರೆ. ಬಿಜೆಪಿಯಿಂದ ಲೋಕಸಭಾ ಕ್ಷೇತ್ರಕ್ಕೂ ಸ್ಪರ್ಧಿಸಬಹುದು. ಯಾವುದೇ ಕಾನೂನಿನ ಅಡ್ಡಿ ಇಲ್ಲ.

• **ಅಶೋಕ ಹಾರನಹಳ್ಳಿ** ಮಾಜಿ ಅಡ್ವೊಕೇಟ್ ಜನರಲ್



ಶಾಸಕ ಸ್ಥಾನದಿಂದ ನನ್ನನ್ನು ಅನರ್ಹಗೊಳಿಸಲಾಗುತ್ತದೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಯಾವುದೇ ಅಪಪ್ರಚಾರಕ್ಕೆ ಕಲಬುರಗಿಯ ಜನತೆ ಕಿವಿಗೊಡಬಾರದು. ಮಂಗಳವಾರವಷ್ಟೇ ಸ್ಪೀಕರ್ ರಮೇಶ್ ಕುಮಾರ್ ಅವರನ್ನು ಭೇಟಿಯಾಗಿ ಮನವಿ ಮಾಡಿಕೊಂಡೆ. ಈ ವೇಳೆ ಕೇಳಿದ ಪ್ರಶ್ನೆಗಳಿಗೆ ಲಿಖಿತವಾಗಿ ವಿವರಣೆ ಸಲ್ಲಿಸಿದ್ದೇನೆ.

• **ಡಾ.ಉಮೇಶ್ ಜಾಧವ್**